ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 349 ಗ್ರಾಪಂಕಾ 2018(ಭಾಗ-8)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 25.01.2019

## ಅಧಿಕೃತ ಜ್ಞಾಪನ

ವಿಷಯ: ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಅಂತರ ಜಿಲ್ಲಾ ವರ್ಗಾವಣೆಯ ಬಗ್ಗೆ.

****

ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 16(a)(ii)ರನ್ವಯ ಕೆಳಕಂಡ ಪಂಚಾಯತಿ ಅಭಿವೃದ್ಧಿ ಅಧಿಕಾರಿಯನ್ನು ಅವರ ಕೋರಿಕೆಯ ಮೇರೆಗೆ ಅವರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯಿಂದ ರಾಮನಗರ ಜಿಲ್ಲೆಗೆ ಅಂತರ ಜಿಲ್ಲಾ ವರ್ಗಾವಣೆ ಮಾಡಿ, ಕೆಳಕಂಡ ಎಲ್ಲಾ ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಡಿಸಿ ಆದೇಶಿಸಿದೆ.

| ಕ್ರ.ಸಂ. | ನೌಕರರ ಹೆಸರು | ಹಾಲಿ ಕಾರ್ಯನಿರ್ವಹಿಸುತ್ತಿರುವ ಸ್ಥಳ ಮತ್ತು ಜಿಲ್ಲೆ | ವರ್ಗಾಯಿಸಿರುವ ಜಿಲ್ಲೆ |
|---|---|---|---|
| 1 | ಶ್ರೀದೇವಿ | ಬದನಗುಪ್ಪೆ ಗ್ರಾಮ ಪಂಚಾಯತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ. | ಮಳೂರು ಪಟ್ಟಣ ಗ್ರಾಮ ಪಂಚಾಯತಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ |

(ಮಾನ್ಯ ಮುಖ್ಯ ಮಂತ್ರಿಯವರಿಂದ ಅನುಮೋದಿತ)

ಷರತ್ತುಗಳು:

1) ಮೊದಲು ನೌಕರರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯಲ್ಲಿನ ತಮ್ಮ ಜೇಷ್ಠತೆಯನ್ನು ಬಿಟ್ಟು ಕೊಡಲು ಹಾಗೂ ವರ್ಗಾವಣೆಗೊಂಡ ಜಿಲ್ಲೆಯಲ್ಲಿನ ತನ್ನ ವೃಂದದ ನೌಕರರ ಜೇಷ್ಠತಾ ಪಟ್ಟಿಯಲ್ಲಿ ಕೊನೆಯವನಾಗಿ ಸೇರ್ಪಡೆಗೊಳ್ಳಲು ಸಿದ್ದರಿರುವುದಾಗಿ ಲಿಖಿತವಾಗಿ ಒಪ್ಪಿಗೆ ನೀಡತಕ್ಕದ್ದು.
2) ಯಾವ ಜಿಲ್ಲೆಗೆ ವರ್ಗಾವಣೆ ಆಗಿ ಹೋಗುವರೊ, ಆ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಆ ಜಿಲ್ಲೆಯಲ್ಲಿ ನೇರ ನೇಮಕಾತಿ ಕೋಟಾದಡಿ ಹುದ್ದೆ ಖಾಲಿ ಇರುವ ಬಗ್ಗೆ ಲಿಖಿತವಾಗಿ ಖಚಿತಪಡಿಸಿಕೊಂಡು ಬಿಡುಗಡೆ ಮಾಡುವುದು.
3) ವರ್ಗಾವಣೆಗೊಳ್ಳುವ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ನೇರ ನೇಮಕಾತಿ ಕೋಟಾದಡಿ ಹುದ್ದೆ ಖಾಲಿ ಇರುವ ಬಗ್ಗೆ ಪರಿಶೀಲಿಸಿ, ಬಿಡುಗಡೆ ಮಾಡಲು ತಿಳಿಸುವುದು. ಯಾವುದೇ ಕಾರಣಕ್ಕೂ ಬಡ್ತಿ ಕೋಟಾದ ಹುದ್ದೆಯ ಎದುರು ಪರಿಗಣಿಸತಕ್ಕದ್ದಲ್ಲ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವೃಂದದಲ್ಲಿ ಸದರಿ ನೌಕರರ ಪರಿವೀಕ್ಷಣಾವಧಿ/ಸ್ಥಾನಪನ್ನ ಅವಧಿ ತೃಪ್ತಿಕರವಾಗಿ ಘೋಷಣೆಯಾಗಿರಬೇಕು.
5) ನೌಕರರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಇರಬಾರದು ಹಾಗೂ ಹೂಡಲು ಉದ್ದೇಶಿಸಿರಬಾರದು.
6) ಇವರ ಜೇಷ್ಠತೆಯು ವರ್ಗಾವಣೆ ಹೊಂದಿದ ಜಿಲ್ಲೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ ನಿಯಮಗಳು) ನಿಯಮಗಳು, 1957 ರ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
7) ಈ ನೌಕರರು ಯಾವುದೇ ವರ್ಗಾವಣೆ ಭತ್ಯೆ, ಪ್ರಯಾಣ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

8) ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 16(ಎ)ರನ್ವಯ ಒಂದಕ್ಕಿಂತ ಹೆಚ್ಚು ಸಲ ಒಂದು ಜಿಲ್ಲಾ ವೃಂದದಿಂದ ಮತ್ತೊಂದು ಜಿಲ್ಲಾ ವೃಂದಕ್ಕೆ ವರ್ಗಾವಣೆ ಮಾಡಲು ಅವಕಾಶವಿರುವುದಿಲ್ಲ. ಈ ಅಂಶವನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

9) ವರ್ಗಾವಣೆಯಾಗಿ ಬಂದ ನೌಕರರನ್ನು ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಗ್ರಾಮ ಪಂಚಾಯತಿಗೆ ಸ್ಥಳ ನಿಯುಕ್ತಿಗೊಳಿಸುವುದು.

10) ಈ ವರ್ಗಾವಣೆಯಿಂದ ಬಾಧಿತರಾಗುವ ನೌಕರರಿಗೆ ಜಿಲ್ಲೆಯೊಳಗೆ ಖಾಲಿ ಇರುವ ಸ್ಥಳಗಳಿಗೆ ಅದೇ ಆದೇಶದಲ್ಲಿ ನಿಯುಕ್ತಿಗೊಳಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮವಹಿಸುವುದು.

ಮೇಲಿನ ನಿಬಂಧನೆಗಳು ಪೂರೈಸಿರುವ ಬಗ್ಗೆ ಖಚಿತಪಡಿಸಿಕೊಂಡು, ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಬಿಡುಗಡೆಗೊಳಿಸಲು ಹಾಗೂ ಸೇರ್ಪಡೆ ಮಾಡಿಕೊಳ್ಳಲು ಕ್ರಮವಹಿಸುವುದು.

27/1/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, **ಚಾಮರಾಜನಗರ** ಮತ್ತು **ರಾಮನಗರ** ಜಿಲ್ಲಾ ಪಂಚಾಯತಿಗಳು.
2. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ.
4. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ. ಅ. & ಪಂ. ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
5. ನಿರ್ದೇಶಕರು (ಪಂ.ರಾಜ್-1), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
6. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.